ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಂಡ ಕಾಲೇಜುಗಳಿಗೆ ಸ್ವಾಯತ್ತ ಕಾಲೇಜಿನ ಸ್ಥಾನಮಾನ ನೀಡುವಂಥ ಯಾವುದೇ ಉಪಬಂಧ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮದಲ್ಲಿ ಇಲ್ಲ. ಆದುದರಿಂದ ಉತ್ತಮ ಕಾಲೇಜುಗಳು ತಮ್ಮದೇ ವ್ಯಾಸಂಗ ಕ್ರಮ ಹಾಗೂ ಪಠ್ಯ ವಿಧಾನ ರೂಪಿಸಿಕೊಂಡು ಅವುಗಳ ಶೈಕ್ಷಣಿಕ ಗುಣಮಟ್ಟವನ್ನು ಸುಧಾರಿಸಿಕೊಳ್ಳಲು ಸ್ವಾತಂತ್ರ ಒದಗಿಸುವಂತೆ ಮಾಡುವುದಕ್ಕಾಗಿ ಇದೇ ಬಗೆಯ ಒಂದು ಉಪಬಂಧವನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮದಲ್ಲಿ ಸೇರಿಸಿಕೊಳ್ಳಬೇಕಾದ ಅಗತ್ಯವಿದೆ. ವಿಶ್ವಬ್ಯಾಂಕ್ ಯೋಜನೆಗಳಿಗೆ ಆಯ್ಕೆಗೊಂಡ ಶಿಕ್ಷಣ ಸಂಸ್ಥೆಗಳಿಗೆ ಸ್ವಾಯತ್ತತೆ ನೀಡತಕ್ಕದ್ದೆಂದು ವಿಶ್ವಬ್ಯಾಂಕ್ ಸಹ ಒತ್ತಾಯಿಸುತ್ತಿದೆ.

ಆದ್ದರಿಂದ ಈ ವಿಧೇಯಕ.

ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಕ್ರಮದಿಂದಾಗಿ ಯಾವುದೇ ಹೆಚ್ಚಿನ ವೆಚ್ಚ ಉಂಟಾಗುವುದಿಲ್ಲ.

ಡಿ.ಹೆಚ್. ಶಂಕರಮೂರ್ತಿ
ಉನ್ನತ ಶಿಕ್ಷಣ ಸಚಿವರು
ಟಿ. ರಾಜಣ್ಣ, ಕಾರ್ಯದರ್ಶಿ

ಅನುಬಂಧ–II

77(163) ಶ್ರೀ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪೂರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ವಿಜಾಪೂರ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿ/ವಿದ್ಯಾರ್ಥಿನಿಯರ ನಿಲಯಗಳು ಯಾವುವು;

ಆ) ಹೆಚ್ಚುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ವಿದ್ಯಾರ್ಥಿ ನಿಲಯ–ಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಯಾವಾಗ ಹೊಸದಾಗಿ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲಾಗುವುದು;

ಈ) ವಿದ್ಯಾರ್ಥಿ ನಿಲಯಗಳನ್ನು ಎಲ್ಲೆಲ್ಲಿ ಪ್ರಾರಂಭಿಸಲಾಗುವುದು;

ಉ) ಈಗಿರುವ ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯಗಳನ್ನು ಯಾವಾಗ ಒದಗಿಸಲಾಗುವುದು?

ಶ್ರೀ ಬಾಲಚಂದ್ರ ಲ. ಜಾರಕಿ ಹೊಳಿ (ಸಮಾಜ ಕಲ್ಯಾಣ ಸಚಿವರು): ಅ) ಸಮಾಜ ಕಲ್ಯಾಣ ಇಲಾಖೆ: ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ ಬಿಜಾಪೂರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 3 ಬಾಲಕರ ಮತ್ತು ಎರಡು ಬಾಲಕಿಯರ ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು ಹಾಗೂ 1 ಬಾಲಕರ ಮತ್ತು 1 ಬಾಲಕಿಯರ ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ನಡೆಸುತ್ತಿದ್ದು, ಅವುಗಳ ವಿವರ ಈ ಕೆಳಕಂಡಂತಿದೆ:

ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು	ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು
1	2
1. ಬಾಲಕರ ವಿದ್ಯಾರ್ಥಿ ನಿಲಯ ಬಿಜಾಪೂರ	1. ಬಾಲಕರ ವಿದ್ಯಾರ್ಥಿ ನಿಲಯ ಬಿಜಾಪೂರ

1	2
2. ಬಾಲಕರ ವಿದ್ಯಾರ್ಥಿ ನಿಲಯ ಕಗ್ಗೋಡ	2. ಬಾಲಕಿಯರ ವಿದ್ಯಾರ್ಥಿ ನಿಲಯ ಬಿಜಾಪೂರ
3. ಬಾಲಕರ ವಿದ್ಯಾರ್ಥಿ ನಿಲಯ, ಶಿವಣಗಿ	
4. ಬಾಲಕಿಯರ ವಿದ್ಯಾರ್ಥಿ ನಿಲಯ, ವಿಜಾಪೂರ	
5. ಬಾಲಕಿಯರ ವಿದ್ಯಾರ್ಥಿ ನಿಲಯ ಹೊನ್ನುಟಗಿ	

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ:

ಬಿಜಾಪೂರ ಮತಕ್ಷೇತ್ರದ ವ್ಯಾಪ್ತಿಯಲ್ಲಿ 1 ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ ನಡೆಯುತ್ತಿದೆ.

1. ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ ಬಿಜಾಪೂರ ಸಿಟಿ

ಆ) ಹೌದು.

ಇ) ಮತ್ತು ಈ) ಹೊಸ ವಿದ್ಯಾರ್ಥಿ ನಿಲಯಗಳನ್ನು ಆಧ್ಯತೆ, ಅವಶ್ಯಕತೆ ಮತ್ತು ಅನುದಾನದ ಲಭ್ಯತೆಗೆ ಅನುಗುಣವಾಗಿ ಪ್ರಾರಂಭಿಸಲು ಯೋಜಿಸಲಾಗುವುದು.

ಉ) ಮತ್ತು ಊ) ಸಮಾಜ ಕಲ್ಯಾಣ ಇಲಾಖೆವತಿಯಿಂದ ಕೊರತೆ ಇರುವ ಮೂಲಭೂತ ಸೌಕರ್ಯಗಳಾದ ಹಾಸಿಗೆ, ಹೊದಿಕೆ, ಪಾತ್ರೆಗಳು, ಕ್ರೀಡಾ ಸಾಮಗ್ರಿಗಳು, ಪೀಠೋಪಕರಣಗಳು, ಟಿ.ವಿ. ಇತ್ಯಾದಿಗಳನ್ನು ಅನುದಾನದ ಲಭ್ಯತೆಯನ್ನು ಅನುಸರಿಸಿ ಒದಗಿಸಲಾಗಿದೆ. ಜೊತೆಗೆ 4 ಸರ್ಕಾರಿ ವಿದ್ಯಾರ್ಥಿ ನಿಲಯಗಳಿಗೆ ಕಟ್ಟಡಗಳನ್ನು ನಿರ್ಮಾಣ ಮಾಡಲಾಗಿದೆ. ಉಳಿದ 3 ವಿದ್ಯಾರ್ಥಿ ನಿಲಯಗಳಿಗೆ ನಿವೇಶನದ ಲಭ್ಯತೆಗೆ ಅನುಗುಣವಾಗಿ ಕಟ್ಟಡ ನಿರ್ಮಾಣ ಕೈಗೊಳ್ಳಲಾಗುವುದು.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆವತಿಯಿಂದ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

164 ಶ್ರೀ ಅಪ್ಪಾಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪೂರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ವಿಜಾಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರ ನಿಲಯಗಳು ಯಾವುವು;

ಆ) ಹೆಚ್ಚುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ವಿದ್ಯಾರ್ಥಿನಿಲಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಹೊಸದಾಗಿ ವಿದ್ಯಾರ್ಥಿನಿಲಯಗಳನ್ನು ಯಾವಾಗ ಮಂಜೂರು ಮಾಡಲಾಗುವುದು;

ಈ) ಹಾಗಿದ್ದಲ್ಲಿ, ವಿದ್ಯಾರ್ಥಿನಿಲಯಗಳನ್ನು ಎಲ್ಲೆಲ್ಲಿ ಪ್ರಾರಂಭಿಸಲಾಗುವುದು;

ಉ) ಈಗಿರುವ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?